# ಸಂಕ್ರಾಂತಿಗೆ ಮುನ್ನ ಅಕ್ರಮ-ಸಕ್ರಮ ಜಾರಿ

# ಪಾಲಿಕೆ ಚುನಾವಣೆ ಗಿಮಿಕ್

## ನೀತಿ ಸಂಹಿತೆಗೆ ಮುನ್ನ ಶಂಕುಸ್ಥಾಪನೆ, ಉದ್ಘಾಟನೆ ಭರಾಟೆ

**4 ಸಾವಿರ ಪೌರ ಕಾರ್ಮಿಕರ ಹುದ್ದೆ ಭರ್ತಿ** ನಗರದ ಬಡವರಿಗೆ ಆರೋಗ್ಯ ವಿಮೆ

**ಕೊಳೆಗೇರಿ ನಿವಾಸಿಗಳಿಗೆ ಹಕ್ಕು ಪತ್ರ** ಡಾಂಬರೀಕರಣ, ರಸ್ತೆ ಗುಂಡಿಗಳಿಗೆ ತೇಪೆ

▪ **ವಿಕ ಸುದ್ದಿಲೋಕ** ಬೆಂಗಳೂರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಚುನಾವಣೆ ಹಿನ್ನೆಲೆಯಲ್ಲಿ ನಗರದ ನಾಗರಿಕರ ವಿಶ್ವಾಸ ಗಿಟ್ಟಿಸಲು ರಾಜ್ಯ ಸರಕಾರ ಹಲವು ಕೊಡುಗೆಗಳನ್ನು ನೀಡಲು ಮುಂದಾಗಿದೆ.

ಇಷ್ಟು ದಿನ ನನೆಗುದಿಗೆ ಬಿದ್ದಿದ್ದ ಯೋಜನೆಗಳನ್ನು ಕೈಗೆತ್ತಿಕೊಂಡು ಕಾರ್ಯಗತಗೊಳಿಸುವಂತೆ ಸರಕಾರ ಅಧಿಕಾರಿಗಳಿಗೆ ಸೂಚಿಸಿದೆ. ಬಿಬಿಎಂಪಿ ಚುನಾವಣೆ ನೀತಿ ಸಂಹಿತೆ ಇದೇ ತಿಂಗಳ 15ರಿಂದ ಜಾರಿಗೆ ಬರಲಿರುವ ಹಿನ್ನೆಲೆಯಲ್ಲಿ ಸರಕಾರ ತರಾತುರಿಯಲ್ಲಿ ಈ ತೀರ್ಮಾನ ಕೈಗೊಂಡಿದೆ.

ಒಮ್ಮೆ ನೀತಿ ಸಂಹಿತೆ ಜಾರಿಗೆ ಬಂದ ಬಳಿಕ ಯೋಜನೆ ಉದ್ಘಾಟನೆ, ಹಕ್ಕು ಪತ್ರ ವಿತರಣೆ ಹಾಗೂ ಅಕ್ರಮ- ಸಕ್ರಮದಂತಹ ಯೋಜನೆ ಜಾರಿಗೊಳಿಸಲು ಅಡ್ಡಿಯಾಗುತ್ತದೆ. ಹೀಗಾಗಿ, ಸರಕಾರ ಒಂದು ವಾರದೊಳಗೆ ಬಾಕಿ ಉಳಿದಿರುವ ಎಲ್ಲ ಯೋಜನೆಗಳನ್ನು ಕಾರ್ಯರೂಪಕ್ಕೆ ತರಲು ತೀರ್ಮಾನ ತೆಗೆದುಕೊಂಡಿದೆ.

ನಾಗರಿಕರು ಬಹಳ ನಿರೀಕ್ಷಿಸುತ್ತಿದ್ದ ಅಕ್ರಮ-ಸಕ್ರಮ ಯೋಜನೆ ಸುಗ್ರೀವಾಜ್ಞೆ ಮೂಲಕ ಜಾರಿಗೊಳ್ಳಲಿದ್ದು, ಸಂಕ್ರಾಂತಿಗೂ ಮುನ್ನ ಅಧಿಸೂಚನೆ ಹೊರಬೀಳಲಿದೆ. ಇದರ ಜತೆಗೆ ನಗರದ ಬಡ ಜನರಿಗೆ ಆರೋಗ್ಯವಿಮೆ ಜಾರಿ, ಕೊಳೆಗೇರಿ ನಿವಾಸಿಗಳಿಗೆ ಹಕ್ಕು ಪತ್ರ ವಿತರಣೆ, ಮೇಲುರಸ್ತೆಗಳ ಉದ್ಘಾಟನೆ ಹಾಗೂ ಡಾಂಬರೀಕರಣ, ರಸ್ತೆ ಗುಂಡಿ ಮುಚ್ಚುವ ಕೆಲಸ ಸಮರೋಪಾದಿಯಲ್ಲಿ ನಡೆಸಲು ನಿರ್ಧರಿಸಲಾಗಿದೆ.

ಬಿಬಿಎಂಪಿ ಚುನಾವಣೆ ಫೆ.21ರಂದು ನಡೆಯಲಿದೆ. ಈ ಹಿನ್ನೆಲೆಯಲ್ಲಿ ಗೃಹ ಕಚೇರಿ ಕೃಷ್ಣಾದಲ್ಲಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರು ಶನಿವಾರ ಬೆಂಗಳೂರಿನ ಸಚಿವರು, ಶಾಸಕರು ಹಾಗೂ ಹಿರಿಯ ಅಧಿಕಾರಿಗಳ ಸಭೆ ನಡೆಸಿ ಬಾಕಿ ಇರುವ ಯೋಜನೆಗಳು ಹಾಗೂ ಕಾಮಗಾರಿಗಳ ಕುರಿತು ಸಮಾಲೋಚಿಸಿದರು. ನಂತರ ಸುದ್ದಿಗೋಷ್ಠಿಯಲ್ಲಿ ಸಭೆ ವಿವರಗಳನ್ನು ತಿಳಿಸಿದರು.

ಕೋರ್ಟ್ ಸೂಚನೆ ಹಾಗೂ ಚುನಾವಣೆ ಆಯೋಗ ನಿಗದಿಪಡಿಸಿರುವ ದಿನಾಂಕದಂದೇ ಬಿಬಿಎಂಪಿ ಚುನಾವಣೆ ನಡೆಯಲಿದೆ. ಈ ವಿಚಾರದಲ್ಲಿ ಯಾವುದೇ ಗೊಂದಲವಿಲ್ಲ. ಚುನಾವಣೆ ಆಯೋಗಕ್ಕೆ ಸರಕಾರ ಎಲ್ಲ ರೀತಿಯ ಸಹಕಾರಗಳನ್ನು ನೀಡಲಿದೆ ಎದು ಹೇಳಿದರು.

**ಸಿಎಂ ಹೇಳಿದಿಷ್ಟು:** ಬಹುದಿನಗಳ ಬೇಡಿಕೆಯಾಗಿರುವ ಅಕ್ರಮ-ಸಕ್ರಮ ಯೋಜನೆ ಸುಗ್ರೀವಾಜ್ಞೆ ಮೂಲಕ ಜಾರಿಗೊಳಿಸಲಾಗುವುದು. ಅಲ್ಲದೆ, ಕೊಳೆಗೇರಿಗಳಲ್ಲಿ ನಿರ್ಮಿಸಲಾಗಿರುವ ಅಕ್ರಮ ಮನೆಗಳನ್ನು ಸಕ್ರಮಗೊಳಿಸಲಾಗುವುದು. ಎಲ್ಲ ನಿವಾಸಿಗಳಿಗೂ ಹಕ್ಕು ಪತ್ರ ವಿತರಿಸಲಾಗುವುದು. ಸರಕಾರದ ಭೂಮಿಯಲ್ಲಿ ಅಕ್ರಮವಾಗಿ ನಿರ್ಮಾಣಗೊಂಡಿರುವ ಕೊಳೆಗೇರಿ ನಿವಾಸಿಗಳ ಮನೆಗಳನ್ನು ಸಕ್ರಮಗೊಳಿಸಲಾಗುತ್ತಿದೆ. ಬಿಬಿಎಂಪಿಯಲ್ಲಿ ಖಾಲಿ ಇರುವ ನಾಲ್ಕು ಸಾವಿರ ಪೌರ ಕಾರ್ಮಿಕರ ಹುದ್ದೆಗಳನ್ನು ಶೀಘ್ರದಲ್ಲೇ ಭರ್ತಿ ಮಾಡಲಾಗುವುದು.

**ಮೇಲು ರಸ್ತೆ:** ರಿಂಗ್ ರಸ್ತೆಯಲ್ಲಿ ಮಾಗಡಿ ರಸ್ತೆ ಮತ್ತು ಮೈಸೂರು ರಸ್ತೆಗೆ ಸಂಪರ್ಕ ಕಲ್ಪಿಸುವ ಸುಮನಹಳ್ಳಿ ಬಳಿ 33 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗಿರುವ ಮೇಲುರಸ್ತೆ ಹಾಗೂ 73 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಿರುವ ಮಾಗಡಿ ಮತ್ತು ಮೈಸೂರು ನಡುವಿನ ಐದೂವರೆ ಕಿ.ಮೀ. ಉದ್ದ ರಸ್ತೆಯನ್ನು ಇದೇ ತಿಂಗಳ 14ರಂದು ಉದ್ಘಾಟಿಸಲಾಗುವುದು.

ಬಿಡಿಎ ವತಿಯಿಂದ 107 ಕೋಟಿ ರೂ. ವೆಚ್ಚದಲ್ಲಿ 12 ಕೆರೆಗಳ ಅಭಿವೃದ್ಧಿ ಕೈಗೊಳ್ಳಲಾಗಿದೆ. ಬಿಬಿಎಂಪಿ ವ್ಯಾಪ್ತಿಯಲ್ಲಿ ಇರುವ ಎಲ್ಲ ಕೆರೆಗಳನ್ನು ಬಿಡಿಎಗೆ ಹಸ್ತಾಂತರಿಸಲಾಗುವುದು. ರಸ್ತೆ ಡಾಂಬರೀಕರಣ ಕಾಮಗಾರಿ ಸಮರೋಪಾದಿಯಲ್ಲಿ ನಡೆದಿದೆ. ಅಲ್ಲದೆ ರಸ್ತೆ ಗುಂಡಿ ತ್ವರಿತವಾಗಿ ಮುಚ್ಚುವಂತೆ ಸೂಚಿಸಲಾಗಿದೆ. ರಾಜರಾಜೇಶ್ವರಿನಗರದಲ್ಲಿ 6 ಕೋಟಿ ರೂ. ವೆಚ್ಚದಲ್ಲಿ ಈಜುಕೊಳ ನಿರ್ಮಿಸುವ ಸಂಬಂಧ ಇದೇ ತಿಂಗಳ 11ರಂದು ಶಂಕುಸ್ಥಾಪನೆ ನೆರವೇರಿಸಲಾಗುವುದು.



ಮುಖ್ಯಮಂತ್ರಿ ಅವರಿಂದ ಗೃಹ ಕಚೇರಿ ಕೃಷ್ಣಾದಲ್ಲಿ ನಗರದ ಸಚಿವರು, ಶಾಸಕರು, ಅಧಿಕಾರಿಗಳೊಂದಿಗೆ ಶನಿವಾರ ಬಿಬಿಎಂಪಿಯ ಕಾರ್ಯವೈಖರಿ ಬಗ್ಗೆ ಸಭೆ.

### ಆರೋಗ್ಯ ವಿಮೆ

ಮಾಸಿಕ ಕಡಿಮೆ ಆದಾಯ ಹೊಂದಿರುವ ನಗರದ ಬಡವರಿಗೆ ಆರೋಗ್ಯ ವಿಮೆ ರಕ್ಷೆ ಯೋಜನೆ ಜಾರಿಗೊಳಿಸಲಾಗುವುದು. ಬಜೆಟ್‌ನಲ್ಲಿ ಪ್ರಕಟಿಸಿರುವಂತೆ ಯೋಜನೆ ಜಾರಿಗೆ ಬರಲಿದೆ. ಆಟೊ ಚಾಲಕರು, ಕೂಲಿ ಕಾರ್ಮಿಕರು, ಬೀದಿ ವ್ಯಾಪಾರಿಗಳು ಸೇರಿದಂತೆ ಬಡ ನಾಗರಿಕರು ಈ ವಿಮೆ ಯೋಜನೆಯಡಿ 50 ಸಾವಿರದ ವರೆಗೂ ಆರೋಗ್ಯ ಸೌಲಭ್ಯ ಪಡೆದುಕೊಳ್ಳಬಹುದು. ನಾನಾ ಕಾರಣಗಳಿಂದ ನನೆಗುದಿಗೆ ಬಿದ್ದಿರುವ ರಸ್ತೆ ಡಾಂಬರೀಕರಣ, ಕೆರೆ ಅಭಿವೃದ್ಧಿ ಯೋಜನೆ, ಚರಂಡಿ ಹಾಗೂ ಕುಡಿಯುವ ನೀರಿನ ಯೋಜನೆಗಳನ್ನು ತಕ್ಷಣವೇ ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗುವುದು.

### ಉನ್ನತಾಧಿಕಾರ ಸಮಿತಿ

ಬೆಂಗಳೂರು ನಗರದಲ್ಲಿ ಸಮಗ್ರ ಅಭಿವೃದ್ಧಿ ಯೋಜನೆ ರೂಪಿಸುವ ಸಂಬಂಧ ಸದ್ಯದಲ್ಲೇ ಉನ್ನತಾಧಿಕಾರ ಸಮಿತಿ ರಚಿಸಲಾಗುವುದು. ಸರಕಾರ ಬಂದ 19 ತಿಂಗಳ ಅವಧಿಯಲ್ಲಿ ಬಿಬಿಎಂಪಿ ವತಿಯಿಂದ 6,378 ಕೋಟಿ ರೂ. ವೆಚ್ಚದಲ್ಲಿ 24,412 ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಇದರಲ್ಲಿ 1,474 ಕೋಟಿ ರೂ. ವೆಚ್ಚದ 4,778 ಕಾಮಗಾರಿಗಳು ಪ್ರಗತಿಯಲ್ಲಿ ಇವೆ. ಜಲಮಂಡಳಿ 720 ಕಾಮಗಾರಿಗಳನ್ನು 175 ಕೋಟಿ ರೂ. ವೆಚ್ಚದಲ್ಲಿ ಕೈಗೊಂಡಿದೆ. ಬಿಡಿಎ 1,554 ಕಾಮಗಾರಿಗಳನ್ನು ಕೈಗೊಂಡಿದ್ದು, ಇದರಲ್ಲಿ 944 ಕಾಮಗಾರಿಗಳು ಪೂರ್ಣಗೊಂಡಿವೆ. ಸಭೆಯಲ್ಲಿ ಸಚಿವರಾದ ಅರವಿಂದ ಲಿಂಬಾವಳಿ, ಸುರೇಶ್‌ಕುಮಾರ್, ಆರ್.ಅಶೋಕ್, ರಾಮಚಂದ್ರಗೌಡ, ಬಿಜೆಪಿ ಶಾಸಕರು, ಸರಕಾರದ ಮುಖ್ಯಕಾರ್ಯದರ್ಶಿ ಎಸ್.ವಿ.ರಂಗನಾಥ್ ಹಾಗೂ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.